# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ವೃತ್ತ, ಬೆಂಗಳೂರು-560 002**

***ಪತ್ರಿಕಾ ಪ್ರಕಟಣೆ*** **ದಿನಾಂಕ: 24.11.2011**

## ಕರ್ತವ್ಯ ಲೋಪ : ಪಾಲಿಕೆ ಸಿಬ್ಬಂದಿ ಅಮಾನತು

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಪಶ್ಚಿಮ ವಲಯದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು (ಗಾಂಧಿನಗರ) ಉಪ ವಿಭಾಗದ ವಾರ್ಡ್ ನಂ.77ಕ್ಕೆ ದಿನಾಂಕ: 24.11.2011 ರಂದು ಪಾಲಿಕೆಯ ಆಯುಕ್ತರು ಜಂಟಿ ಆಯುಕ್ತರು (ಪಶ್ಚಿಮ) ರವರೊಂದಿಗೆ ಗೀತಾಂಜಲಿ ಚಿತ್ರಮಂದಿರ, ಲಿಂಕ್ ರಸ್ತೆ ಸ್ಥಳ ಪರಿಶೀಲನೆ ಮಾಡಿದ್ದು, 2 ರಿಂದ 3 ಅಡಿ ಅಗಲದ ನಾಲ್ಕೈದು ರಸ್ತೆ ಗುಂಡಿಗಳನ್ನು ಮುಚ್ಚದೇ ಇರುವುದು ಕಂಡುಬಂದಿರುತ್ತದೆ. ಈ ಬಗ್ಗೆ ಕಾಮಗಾರಿ ಇಲಾಖೆಗಳಿಗೆ ರಸ್ತೆಗುಂಡಿಗಳನ್ನು ಮುಚ್ಚುವಂತೆ ಆಯುಕ್ತರು ಆದೇಶಿಸಿದ್ದರೂ ಸಹ ಕಾಮಗಾರಿ ಕೆಲಸ ಕಾರ್ಯಗಳನ್ನು ಸಮರ್ಪಕವಾಗಿ ನಿರ್ವಹಿಸದೇ ಆಗುವ ಅನಾಹುತಗಳಿಗೆ ಎಡೆಮಾಡಿಕೊಟ್ಟು ಕರ್ತವ್ಯಲೋಪವೆಸಗಿರುವ ಹಿನ್ನೆಲೆಯಲ್ಲಿ ವಾರ್ಡ್ ನಂ.77ರ ಸಹಾಯಕ ಅಭಿಯಂತರರಾದ ಶ್ರೀ ಧನರಾಜ್. ಜಿ. ನಾಯಕ್ ರವರನ್ನು ಈ ತಕ್ಷಣದಿಂದ ಜಾರಿಗೆ ಬರುವಂತೆ ಇಲಾಖಾ ವಿಚಾರಣೆ ನಿರೀಕ್ಷಿಸಿ, ಪಾಲಿಕೆ ಸೇವೆಯಿಂದ ಅಮಾನತ್ತುಪಡಿಸಲಾಗಿದೆ ಎಂದು ಪಶ್ಚಿಮ ವಲಯದ ಜಂಟಿ ಆಯುಕ್ತರು ಆದೇಶ ಹೊರಡಿಸಿದ್ದಾರೆ.

**ಸಾರ್ವಜನಿಕ ಸಂಪರ್ಕಾಧಿಕಾರಿ**

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ವೃತ್ತ, ಬೆಂಗಳೂರು-560 002**

***ಪತ್ರಿಕಾ ಪ್ರಕಟಣೆ*** **ದಿನಾಂಕ: 24.11.2011**

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಬರುವ 8 ವಲಯಗಳಲ್ಲೂ ಉದ್ದಿಮೆ ಪರವಾನಿಗೆಗಳ ನೀಡಿಕೆ ಪ್ರಕ್ರಿಯೆಯನ್ನು ತೀವ್ರತರವಾಗಿ ಮಾಡಲು ಇಂದು ಪೂಜ್ಯ ಮಹಾಪೌರರು ಆರೋಗ್ಯ ಇಲಾಖೆಯ ಅಧಿಕಾರಿಗಳ ಸಭೆ ಕರೆದು, ಉದ್ದಿಮೆ ಪರವಾನಗಿ ನವೀಕರಣ ಕಾರ್ಯವನ್ನು ಚುರುಕುಗೊಳಿಸಲು ಸೂಚಿಸಿದರು.

ಉದ್ದಿಮೆ ಪರವಾನಗಿ ನವೀಕರಣ ಕಾರ್ಯವನ್ನು ಕಳೆದ ವರ್ಷ ಪಾಲಿಕೆಯ ವ್ಯಾಪ್ತಿಯಲ್ಲಿ 3 ಲಕ್ಷ ಉದ್ದಿಮೆ ಪರವಾನಗಿಯನ್ನು ನೀಡಲು ಗುರಿ ಹೊಂದಿದ್ದು, ಅದರಲ್ಲಿ 49 ಸಾವಿರ ಉದ್ದಿಮೆಗಳಿಗೆ ಪರವಾನಗಿ ನೀಡಲಾಗಿತ್ತು. ಈ ವರ್ಷ ಹೊಸದಾಗಿ 55 ಸಾವಿರ ಉದ್ದಿಮೆಗಳನ್ನು ಗುರುತಿಸಲಾಗಿದೆ. ಈ ರೀತಿ ಗುರುತಿಸಲಾದ ಉದ್ದಿಮೆಗಳಿಗೆ ಪರವಾನಗಿ ನೀಡುವ ಮತ್ತು ಈಗಾಗಲೇ ಪರವಾನಗಿ ಪಡೆದ ಉದ್ದಿಮೆಗಳಿಗೆ ನವೀಕರಣ ಮಾಡುವ ಕಾರ್ಯ ಪ್ರಗತಿಯಲ್ಲಿರುತ್ತದೆ. ಪ್ರತಿವಾರ ವಲಯ ಮಟ್ಟದಲ್ಲಿ ಸಭೆ ನಡೆಸಿ, ಉದ್ದಿಮೆ ನೀಡುವಂತಹ ಕಾರ್ಯವನ್ನು ಚುರುಕುಗೊಳಿಸಲು ವಲಯ ಜಂಟಿ ಆಯುಕ್ತರುಗಳಿಗೆ ಕಟ್ಟುನಿಟ್ಟಿನ ಆದೇಶ ನೀಡಿದರು.

ಪ್ರತಿ ತಿಂಗಳಿಗೊಮ್ಮೆ ಮಹಾಪೌರರು, ಉಪ ಮಹಾಪೌರರು ಮತ್ತು ಸ್ಥಾಯಿ ಸಮಿತಿಗಳ ಅಧ್ಯಕ್ಷರ ನೇತೃತ್ವದಲ್ಲಿ ಸಭೆಯನ್ನು ಕರೆಯಲಾಗುವುದು ಎಂದು ತಿಳಿಸಿ, ಪುನಃ ಡಿಸೆಂಬರ್ 20 ರಂದು ಉದ್ದಿಮೆ ಪರವಾನಗಿ ನೀಡುವ ಹಾಗೂ ನವೀಕರಿಸುವ ಪ್ರಕ್ರಿಯೆ ಕುರಿತು ಪರಿಶೀಲಿಸಲಾಗುವುದೆಂದು ತಿಳಿಸಿದರು.

ಸಭೆಯಲ್ಲಿ ಹಾಜರಿದ್ದ ಪಾಲಿಕೆಯ ಆಯುಕ್ತರು ಮಾತನಾಡಿ, ಅನಧಿಕೃತವಾಗಿ ನಡೆಸುತ್ತಿರುವ ಉದ್ದಿಮೆಗಳನ್ನು ಗುರುತಿಸಿ, ಕಡ್ಡಾಯವಾಗಿ ಪರವಾನಗಿ ಪಡೆಯಲು ಸೂಚಿಸಬೇಕು. ಇಲ್ಲದಿದ್ದಲ್ಲಿ ನೋಟಿಸ್ ಜಾರಿ ಮಾಡಿ, ನಿರ್ದಾಕ್ಷಿಣ್ಯವಾಗಿ ಉದ್ದಿಮೆಯನ್ನು ಸ್ಥಗಿತಗೊಳಿಸುವಂತೆ ಕ್ರಮ ಕೈಗೊಳ್ಳಲು ವಲಯ ಜಂಟಿ ಆಯುಕ್ತರಿಗೆ ತಿಳಿಸಿದರು.

ಈ ಸಭೆಯಲ್ಲಿ ಉಪ ಮಹಾಪೌರರು, ವಿವಿಧ ಸ್ಥಾಯಿ ಸಮಿತಿಗಳ ಅಧ್ಯಕ್ಷರುಗಳು, ವಲಯ ಅಪರ / ಜಂಟಿ ಆಯುಕ್ತರುಗಳು, ಆರೋಗ್ಯ ಇಲಾಖೆಯ ಅಧಿಕಾರಿಗಳು ಹಾಗೂ ಹಿರಿಯ ಅಧಿಕಾರಿಗಳು ಹಾಜರಿದ್ದರು.

**ಸಾರ್ವಜನಿಕ ಸಂಪರ್ಕಾಧಿಕಾರಿ**

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ವೃತ್ತ, ಬೆಂಗಳೂರು-560 002**

***ಪತ್ರಿಕಾ ಪ್ರಕಟಣೆ*** **ದಿನಾಂಕ: 24.11.2011**

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಆಯುಕ್ತರಾದ ಶ್ರೀ ಸಿದ್ದಯ್ಯ ರವರು ಇಂದು ಸುತ್ತೋಲೆ ಹೊರಡಿಸಿ, ಪಾಲಿಕೆಯ ವ್ಯಾಪ್ತಿಯಲ್ಲಿ ಬರುವ ರಸ್ತೆಗಳಲ್ಲಿ ಉಂಟಾಗಿರುವ ಗುಂಡಿಗಳನ್ನು ತ್ವರಿತವಾಗಿ ಮುಚ್ಚಲು ಕ್ರಮ ಕೈಗೊಳ್ಳಲು ಸೂಚಿಸಿದ್ದಾರೆ.

ಈಗಾಗಲೇ ಹಲವಾರು ಸಭೆಗಳಲ್ಲಿ ಮತ್ತು ಸುತ್ತೋಲೆಗಳ ಮೂಲಕ ರಸ್ತೆಗಳಲ್ಲಿ ಉಂಟಾಗಿರುವ ಗುಂಡಿಗಳನ್ನು ತ್ವರಿತವಾಗಿ ಮುಚ್ಚಲು ಕ್ರಮ ಕೈಗೊಳ್ಳಲು ಸೂಚಿಸಲಾಗಿದೆ. ಪೂಜ್ಯ ಮಹಾಪೌರರು, ಉಪ ಮಹಾಪೌರರು ಹಾಗೂ ಪಾಲಿಕೆಯ ಸದಸ್ಯರುಗಳು ರಸ್ತೆಗಳಲ್ಲಿ ಉಂಟಾಗಿರುವ ಗುಂಡಿಗಳನ್ನು ಮುಚ್ಚದಿರುವ ಬಗ್ಗೆ ಅಸಮಾದಾನವನ್ನು ವ್ಯಕ್ತಪಡಿಸಿದ್ದು, ಮಾಧ್ಯಮಗಳಲ್ಲಿಯೂ ಸಹ ಈ ಬಗ್ಗೆ ಹಲವಾರು ದೂರುಗಳು ಹಾಗೂ ವರದಿಗಳು ಪ್ರಕಟಗೊಳ್ಳುತ್ತಿವೆ. ಗುಂಡಿಗಳನ್ನು ಮುಚ್ಚಲು ಅಧಿಕವಾಗಿ ಅನುದಾನವನ್ನು ಸಹ ಬಿಡುಗಡೆ ಮಾಡಲಾಗಿದ್ದು, ಆದಾಗ್ಯೂ ತ್ವರಿತವಾಗಿ ಕ್ರಮ ಕೈಗೊಂಡು ರಸ್ತೆಗಳಲ್ಲಿ ಉಂಟಾಗಿರುವ ರಸ್ತೆ ಗುಂಡಿಗಳನ್ನು ಮತ್ತು ರಸ್ತೆ ಅಗೆತಗಳನ್ನು ಮುಚ್ಚಲು ಕ್ರಮ ಕೈಗೊಳ್ಳದಿರುವುದಕ್ಕೆ ವಿಷಾದವನ್ನು ವ್ಯಕ್ತಪಡಿಸಿದ್ದಾರೆ.

ಈ ಹಿನ್ನೆಲೆಯಲ್ಲಿ ದಿನಾಂಕ: 25.11.2011 ಮತ್ತು 26.11.2011 ರಂದು ರಾತ್ರಿ ಎಲ್ಲಾ ವಲಯಗಳಲ್ಲಿನ ಅಪರ / ಜಂಟಿ ಆಯುಕ್ತರುಗಳು ಸಂಬಂಧಪಟ್ಟ ಮುಖ್ಯ ಅಭಿಯಂತರರು ಹಾಗೂ ಕಾರ್ಯಪಾಲಕ ಅಭಿಯಂತರರೊಡನೆ ಅವರವರ ವ್ಯಾಪ್ತಿಯಲ್ಲಿ ಬರುವ ಆರ್ಟೀರಿಯಲ್, ಸಬ್ ಆರ್ಟೀರಿಯಲ್ ಮತ್ತು ಮುಖ್ಯರಸ್ತೆಗಳನ್ನು ಪರಿವೀಕ್ಷಿಸಿ, ರಸ್ತೆಗುಂಡಿಗಳು ಮತ್ತು ರಸ್ತೆ ಅಗೆತಗಳನ್ನು ಗುರುತಿಸಿ, ಅವುಗಳನ್ನು ತ್ವರಿತವಾಗಿ ವಿಶಿಷ್ಟ ವಿವರಣೆಯಂತೆ ಮುಚ್ಚಲು ಕ್ರಮ ಕೈಗೊಂಡು ವರದಿ ನೀಡುವಂತೆ ಆಯುಕ್ತರು ಸೂಚಿಸಿದ್ದಾರೆ.

**ಸಾರ್ವಜನಿಕ ಸಂಪರ್ಕಾಧಿಕಾರಿ**